**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ,**

**ಚಿಕ್ಕನಾಯಕನಹಳ್ಳಿ**

**ಸಿ.ಸಿ. ನಂ.2349/2022**

**ಸಿ ಡಬ್ಲ್ಯೂಃ 3**

**ಪಿ ಡಬ್ಲ್ಯೂಃ 4**

| | | |
|---|---|---|
| ಹೆಸರು | : | ಕಾಂತರಾಜು |
| ತಂದೆಯ ಹೆಸರು | : | ಮಾರಣ್ಣ |
| ವಯಸ್ಸು | : | 26 ವರ್ಷ |
| ಉದ್ಯೋಗ | : | ವ್ಯಾಪಾರ |
| ವಾಸಸ್ಥಳ | : | ಹುಳಿಯಾರು |

**ದಿನಾಂಕಃ 03.06.2026 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಈಗ ಒಂದು ದಾಖಲೆಯನ್ನು ತೋರಿಸಿದ್ದು ಅದರಲ್ಲಿ ಅವರ ಸಹಿಯನ್ನು ಒಪ್ಪಿಕೊಳ್ಳುತ್ತಾರೆ. ಸದರಿ ದಾಖಲೆ ಸ್ಥಳ ಪಂಚನಾಮೆ ಆಗಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿ ನಿಪಿ-4 (ಸಿ) ಎಂದು ಗುರುತಿಸಲಾಯಿತು. ನಾನು ಠಾಣೆಗೆ ಈ ಅಪಘಾತ ಸಂಬಂಧ ಹೋದಾಗ ಪೋಲಿಸರು ಪಂಚನಾಮೆಗೆ ನನ್ನ ಸಹಿ ಪಡೆದಿರುತ್ತಾರೆ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿರುವುದಿಲ್ಲ. ಪಂಚನಾಮೆ ವಿಚಾರ ನನಗೆ ಗೊತ್ತಿರುವುದಿಲ್ಲ.

**(ಈ ಹಂತದಲ್ಲಿ ಸ.ಸ.ಅ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಅವರಿಗೆ ಪಾಟೀ ಸವಾಲು ಮಾಡಲು ಅನುಮತಿಸಬೇಕೆಂದು ಕೇಳಿಕೊಂಡ ಮೇರೆಗೆ ಅನುಮತಿಸಲಾಗಿದೆ)**

<u>ಪಾಟೀ ಸವಾಲುಃ ಎ ಪಿ ಪಿ ರವರಿಂದಃ</u>

ಅಪಘಾತ ಆದನಂತರ ದಿನಾಂಕ ಃ 18.09.2022 ರಂದು ಹಂದನಕೆರೆ ಪೋಲಿಸರು ನನ್ನನ್ನು ಹಾಗೂ ಚಾಸಾ-2 ಮತ್ತು 4 ರವರನ್ನು ಅಪಘಾತ ಸ್ಥಳಕ್ಕೆ ಬರಮಾಡಿಕೊಂಡು ಚಾಸಾ-2 ತೋರಿಸಿಕೊಟ್ಟ ಹಾಗೆ ಅಪಘಾತ ಸ್ಥಳದ ಪಂಚನಾಮೆಯನ್ನು ಮಾಡಿದ್ದರು ಎಂದರೆ ಸರಿಯಲ್ಲ. ನಂತರ ಅದರ ಅಂಶವನ್ನು ಓದಿ ಹೇಳಿ ನನ್ನ ಮತ್ತು ಪಂಚರ ಸಹಿಯನ್ನು ಸ್ಥಳದಲ್ಲೇ ಪಡೆದರು ಎಂದರೆ ಸರಿಯಲ್ಲ. ಪಂಚನಾಮೆಯನ್ನು ಆದಿವಸ ಬೆಳಿಗ್ಗೆ 10-30 ರಿಂದ 11-30 ರವರೆಗೆ ಜರುಗಿಸಿದರು ಎಂದರೆ ಸರಿಯಲ್ಲ. ನನಗೆ ಪಂಚನಾಮೆ ವಿಚಾರ ಎಲ್ಲ ಗೊತ್ತಿದ್ದರು ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

<u>**ಮರು ವಿಚಾರಣೆಃ**</u> ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)**

ಓ.ಹೇ.ಕೆ.ಸರಿ ಇದೆ.

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು
ಹಾಗೂ ಜೆ.ಎಂ.ಎಫ್.ಸಿ. ನ್ಯಾಯಾಲಯ,
ಚಿಕ್ಕನಾಯಕನಹಳ್ಳಿ.